ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಸರ್ಕಾರಿ ಶಾಲೆಗಳ ಆಸ್ತಿಗಳ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):-

521(719) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿರುವ ಸರ್ಕಾರಿ ಕಿರಿಯ, ಹಿರಿಯ ಪ್ರಾಥಮಿಕ, ಪಾಠಶಾಲೆ ಹಾಗೂ ಸರ್ಕಾರಿ ಪ್ರೌಢ ಶಾಲೆಗಳು ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಎಷ್ಟು; (ಕ್ರಮವಾಗಿ ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಶಾಲೆಗಳು ಇರುವ ಜಾಗಗಳು ಶಿಕ್ಷಣ ಇಲಾಖೆಯ ಅಧೀನದಲ್ಲಿದೆಯೇ ;

(ಇ) ಸದರಿ ಸರ್ಕಾರಿ ಶಾಲೆಗಳು ಇರುವ ಜಾಗಗಳ ಬಗ್ಗೆ Assessment Register ಗಳನ್ನು ನಿರ್ವಹಿಸಲಾಗುತ್ತಿದೆಯೇ;

(ಈ) ಇವರ ಸಂಬಂಧ ಸರ್ಕಾರವು ಸರ್ಕಾರಿ ಶಾಲೆಗಳ ಜಾಗವನ್ನು ಶಿಕ್ಷಣ ಇಲಾಖೆಯ ಸುಪರ್ದಿಗೆ ತೆಗೆದುಕೊಳ್ಳುವ ಸಂಬಂಧ ಕೈಗೊಂಡ ಕ್ರಮಗಳು ಯಾವುದು ;

(ಉ) ಸರ್ಕಾರವು ಶಿಕ್ಷಣ ಇಲಾಖೆಯ ಆಸ್ತಿಗಳನ್ನು ಸಂರಕ್ಷಿಸುವ ಸಂಬಂಧ ಶಿಕ್ಷಣ ಸಂಸ್ಥೆಗಳ ಆಸ್ತಿಗಳ ಪ್ರಾಧಿಕಾರ ಅಥವಾ ನಿಗಮ ರಚಿಸಲು ಉದ್ದೇಶಿಸಿದೆಯೇ ?